ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ
ಬೆಂಗಳೂರು
26 MAR 2018
ಕ್ರಮ ಸಂಖ್ಯೆ 2846

20 copy

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** Victim Compensation Scheme ಯೋಜನೆಯಡಿ 2018-19ನೇ ಸಾಲಿನ ಅನುದಾನವನ್ನು ರಾಜ್ಯದ ಆಯಾ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ಅಧಿಸೂಚನೆ ಸಂಖ್ಯೆ : ಹೆಚ್‌ಡಿ 01 ಪಿಸಿಬಿ 2011, ದಿನಾಂಕ:22/02/2012 ಮತ್ತು 19/09/2013 ಹಾಗೂ 31/03/2015.

******

**ಪ್ರಸ್ತಾವನೆ :**

ಮೇಲೆ ಓದಲಾದ ಅಧಿಸೂಚನೆ ಸಂಖ್ಯೆ : ಹೆಚ್‌ಡಿ 01 ಪಿಸಿಬಿ 2011, ದಿನಾಂಕ : 22/02/2012ರಂತೆ, ರಾಜ್ಯದಲ್ಲಿ ಅಪರಾಧಗಳಿಗೆ ಬಲಿಯಾದವರಿಗೆ ಪರಿಹಾರ ನೀಡುವ ಕುರಿತಂತೆ ಆದೇಶ ಹೊರಡಿಸಲಾಗಿದ್ದು, ದಿನಾಂಕ: 19/09/2013 ಹಾಗೂ 31/03/2015ರ ಸರ್ಕಾರಿ ಆದೇಶಗಳಲ್ಲಿ ಅಪರಾಧಗಳಿಗೆ ಬಲಿಯಾದವರಿಗೆ ನೀಡುವ ಪರಿಹಾರ ಧನದಲ್ಲಿ ಹೆಚ್ಚಳ ಮಾಡಿ ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ ರಾಜ್ಯದಲ್ಲಿ ನೊಂದವರಿಗೆ ಪರಿಹಾರ ನೀಡುವ ಯೋಜನೆಗೆ 2012-13 ರಿಂದ 2017-18ನೇ ಸಾಲಿನವರೆಗೆ ಆರ್ಥಿಕ ವರ್ಷದ ಆಯವ್ಯಯದಲ್ಲಿರುವ ಮೊತ್ತವನ್ನು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಲಾಗುತ್ತಿದೆ. ಸದರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಹಾಗೂ ಸಂತ್ರಸ್ಥರಿಗೆ/ಸಾರ್ವಜನಿಕರಿಗೆ ಸಕಾಲದಲ್ಲಿ ಪರಿಹಾರ ವಿತರಿಸುವ ಉದ್ದೇಶದಿಂದ ಪ್ರಸಕ್ತ 2018-19ನೇ ಸಾಲಿನಿಂದ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಬದಲಾಗಿ ರಾಜ್ಯದ ಆಯಾಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ನೇರವಾಗಿ ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 22 ಪಿಸಿಬಿ 2018, ದಿನಾಂಕ: 21.03.2018

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ದೌರ್ಜನ್ಯ/ಅಪರಾಧಕ್ಕೊಳಗಾದವರಿಗೆ ಪರಿಹಾರ ಧನ ನೀಡುವ ಯೋಜನೆಯಾದ ಸಂತ್ರಸ್ಥ ಪರಿಹಾರ ಯೋಜನೆಯ (Victim Compensation Scheme) ಲೆಕ್ಕ ಶೀರ್ಷಿಕೆ: "2235-60-200-8-01-100 ಧನ ಸಹಾಯ/ಪರಿಹಾರ (ಯೋಜನೇತರ)"ರ ಅಡಿ 2018-19ನೇ ಸಾಲಿನ ಆರ್ಥಿಕ ವರ್ಷದಲ್ಲಿ ರೂ.500.00ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿದ್ದು, ಈ ಲೆಕ್ಕ ಶೀರ್ಷಿಕೆಯಡಿ ಅನುದಾನವನ್ನು ಬಿಡುಗಡೆ ಮಾಡಿ ಒಳಾಡಳಿತ ಇಲಾಖೆಯು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಅನುಷ್ಠಾನಗೊಳಿಸುವ ಬದಲಾಗಿ, ರಾಜ್ಯದ ಆಯಾಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಅನುಷ್ಠಾನಗೊಳಿಸಲು ನಿರ್ಧರಿಸಿ ಆದೇಶಿಸಲಾಗಿದೆ.

ಸಂತ್ರಸ್ಥರಿಗೆ ಪರಿಹಾರ ನೀಡುವ ಮುನ್ನ ಸರ್ಕಾರದ ಅಧಿಸೂಚನೆ ಸಂಖ್ಯೆ : ಹೆಚ್‌ಡಿ 01 ಪಿಸಿಬಿ 2011, ದಿನಾಂಕ: 22/02/2012 ಮತ್ತು ಸರ್ಕಾರದ ಆದೇಶ ಸಂಖ್ಯೆ : ಹೆಚ್‌ಡಿ 01 ಪಿಸಿಬಿ 2011, ದಿನಾಂಕ: 31/03/2015ರಲ್ಲಿ ನಿಗಧಿಪಡಿಸಿರುವ ಎಲ್ಲಾ ವಿಧಾನಗಳನ್ನು ಅನುಸರಿಸುವುದರೊಂದಿಗೆ (ಪ್ರತಿ ಲಗತ್ತಿಸಿದೆ) ಈ ಕೆಳಕಂಡ ಷರತ್ತುಗಳನ್ನು ಅನುಸರಿಸತಕ್ಕದ್ದು:-

1) ಆಯಾಯಾ ಜಿಲ್ಲಾಧಿಕಾರಿಗಳು ಸಂತ್ರಸ್ಥರ ಪ್ರಕರಣವಾರು ಸೂಕ್ತ ದಾಖಲೆಗಳನ್ನು ಪರಿಶೀಲಿಸುವುದು.
2) ಅರ್ಹ ಸಂತ್ರಸ್ಥರಿಗೆ ನಿಗಧಿತ ಸಮಯದಲ್ಲಿ ಪರಿಹಾರ ಧನವನ್ನು ವಿತರಿಸುವುದು.
3) ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಹಾರ ಮೊತ್ತವನ್ನು ನೀಡಲು ಉಪವಿಭಾಗಾಧಿಕಾರಿ/ತಹಸೀಲ್ದಾರರು ಶಿಫಾರಸ್ಸು ಮಾಡುವ ಪ್ರಾಧಿಕಾರಿಯಾಗಿದ್ದು, ಆಯಾಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಮಂಜೂರಾತಿ ನೀಡುವ ಪ್ರಾಧಿಕಾರಿಯಾಗಿರುತ್ತಾರೆ. ಮಂಜೂರಾತಿ ಆದೇಶದನ್ವಯ ಸರ್ಕಾರದಿಂದ ಅಂತಿಮ ಆದೇಶ ಹೊರಡಿಸಲಾಗುವುದು.
4) ಪ್ರಕರಣವಾರು ವಿವರಗಳೊಗೊಂಡ ಪಟ್ಟಿಯನ್ನು ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಕಾಲ ಕಾಲಕ್ಕೆ ಸಲ್ಲಿಸಬೇಕು.
5) ಪರಿಹಾರ ವಿತರಿಸಿದ ಕೂಡಲೇ ಸಂತ್ರಸ್ಥರಿಗೆ ಪರಿಹಾರ ಮೊತ್ತದ ಸ್ವೀಕೃತಿಯನ್ನು ಪಡೆಯುವುದು.
6) ಸದರಿ ಅನುದಾನವನ್ನು ಆಯಾಯಾ ಪ್ರಕರಣಗಳಿಗೆ ಅನುಗುಣವಾಗಿ ಬಿಡುಗಡೆ ಮಾಡಲಾದ ಬಗ್ಗೆ 'ಹಣ ಬಳಕೆ ಪ್ರಮಾಣ ಪತ್ರ' ವನ್ನು ಸರ್ಕಾರಕ್ಕೆ ಕಾಲ ಕಾಲಕ್ಕೆ ಸಲ್ಲಿಸುವಂತೆ ಸೂಚಿಸಿದೆ.
7) ದಿನಾಂಕ: 01.04.2018ರ ನಂತರದ ಮನವಿಗಳನ್ನು ಪರಿಗಣಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 96 ವೆಚ್ಚ 11/18, ದಿನಾಂಕ: 13.03.2018ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

V. Susheela
(ವಿ.ಸುಶೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ, (ಅಪರಾಧಗಳು)

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಮತ್ತು ಒಳಾಡಳಿತ ಇಲಾಖೆ 200 ಪ್ರತಿಗಳನ್ನು ಒದಗಿಸುವಂತೆ ಕೋರಿದೆ

ಪ್ರತಿಯನ್ನು ಮಾಹಿತಿಗಾಗಿ :

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
3) ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ರವರ ಕಾರ್ಯದರ್ಶಿ, ಕರ್ನಾಟಕ, (ಲೆಕ್ಕ ಪರಿಶೋಧನೆ-1) (ಲೆಕ್ಕ ಪರಿಶೋಧನೆ-2), ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ).
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
6) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, 1ನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು-560027.
7) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8) ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು ನಗರ, ಬೆಂಗಳೂರು.
9) ಉಪ ನಿರ್ದೇಶಕರು, ಖಜಾನೆ ಇಲಾಖೆ, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, 2ನೇ ಮಹಡಿ, ದಕ್ಷಿಣ ಬ್ಲಾಕ್, ಖನಿಜ ಭವನ, ಬೆಂಗಳೂರು ನಗರ, ಬೆಂಗಳೂರು.
10) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
11) ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಸೆ.ಅ.ಸ.ಸೇ.) ಒಳಾಡಳಿತ ಇಲಾಖೆ, ಬೆಂಗಳೂರು.
12) ಸರ್ಕಾರದ ಉಪ ಕಾರ್ಯದರ್ಶಿ, (ಕಾನೂನು ಮತ್ತು ಸುವ್ಯವಸ್ಥೆ), ಒಳಾಡಳಿತ ಇಲಾಖೆ, ಬೆಂಗಳೂರು.
13) ಶಾಖಾಧಿಕಾರಿ (ವೆಚ್ಚ-11), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
14) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಒಳಾಡಳಿತ ಇಲಾಖೆ.
15) ಶಾಖಾ ರಕ್ಷಾ ಕಡತ ಪ್ರತಿಗಳು.